145772 ಇದ್ದು ಒಂದು ಸಮುದಾಯ ಆರೋಗ್ಯ ಕೇಂದ್ರವಾಗಿ ಕುಮಟಾ ತಾಲ್ಲೂಕು ಆಸ್ಪತ್ರೆ ಕಾರ್ಯನಿರ್ವಹಿಸುತ್ತಿದ್ದು, ನಾಗರೀಕರು ಆರೋಗ್ಯ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ

ಇ) ಮಾರ್ಗಸೂಚಿ ಪ್ರಕಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು

614 (1064) ಶ್ರೀ ಮೋಹನ್ ಕೃಷ್ಣ ಶೆಟ್ಟಿ (ಕುಮಟಾ) ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಮಟಾ ತಾಲ್ಲೂಕಿನಲ್ಲಿ ಉದ್ಯೋಗ ಪರ ವೃತ್ತಿಗಾಗಿ ಅಪೇಕ್ಷಿಸುವ ವಿದ್ಯಾರ್ಥಿಗಳಿಗಾಗಿ ಕೈಗಾರಿಕಾ ತರಬೇತಿ ಸಂಸ್ಥೆ (ಐ ಟಿ ಐ)ಯನ್ನು ಸ್ಥಾಪಿಸುವ ಅಗತ್ಯವನ್ನು ಸರ್ಕಾರ ಮನಗಂಡಿದೆಯೇ?

ಆ) ಹಾಗಿದ್ದಲ್ಲಿ, ಈ ಭಾಗದ ನಾಗರೀಕರ ಬಹುನಿರೀಕ್ಷಿತ ಐ ಟಿ ಐ ಯನ್ನು ಈವರೆಗೆ ಮಂಜೂರು ಮಾಡದಿರಲು ಕಾರಣವೇನು?

ಇ) ಹಾಗಿದ್ದಲ್ಲಿ, ಮಂಜೂರು ನೀಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಈ) ಹಾಗಿದ್ದಲ್ಲಿ ಯಾವಾಗ ಮಂಜೂರು ನೀಡಲಾಗುವುದು

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) ಹೌದು

ಆ) ಅನುದಾನದ ಕೊರತೆಯಿಂದ

ಇ) ಇಲ್ಲ

ಈ) ಅನುದಾನ ಲಭ್ಯತೆಯನ್ನು ಆಧರಿಸಿ ಪರಿಶೀಲಿಸಲ್ಪಡುತ್ತದೆ

615 (1065) ಶ್ರೀ ಮೋಹನ್ ಕೃಷ್ಣ ಶೆಟ್ಟಿ (ಕುಮಟಾ) ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಮಟಾ ತಾಲ್ಲೂಕಿನ ಪಶುಸಂಗೋಪನಾ ಇಲಾಖೆಯಲ್ಲಿ ಪಶುವೈದ್ಯರು ಹಾಗೂ ಸಿಬ್ಬಂದಿಗಳ ಬಹಳಷ್ಟು ಹುದ್ದೆಗಳು ಖಾಲಿ ಇರುವುದರಿಂದ ನಾಗರೀಕರಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದರಿಂದಾಗಿ ಪಶುವೈದ್ಯಕೀಯ ಸೇವೆಯಲ್ಲಿ ಆಗುತ್ತಿರುವ ತೊಂದರೆಯನ್ನು ನಿವಾರಿಸಲು ಕೈಗೊಳ್ಳಲಾದ ಕ್ರಮಗಳೇನು?

ಇ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳಿಗೆ ಯಾವಾಗ ನೇಮಕ ಮಾಡಲಾಗುವುದು?

ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು)

ಅ) ಕುಮಟಾ ಸಂಚಾರಿ ಪಶುಚಿಕಿತ್ಸಾಲಯದಲ್ಲಿ ಪಶುವೈದ್ಯಾಧಿಕಾರಿ ಮತ್ತು ಚಾಲಕರ ಹುದ್ದೆ ಹಾಗೂ ಗೋಕರ್ಣದ ಪಶುಚಿಕಿತ್ಸಾಲಯದಲ್ಲಿ ಒಂದು ಪಶುವೈದ್ಯಾಧಿಕಾರಿ ಹುದ್ದೆ ಮಾತ್ರ ಖಾಲಿ ಇದೆ

ಆ) ಕುಮಟಾ ಸಂಚಾರಿ ಪಶು ಚಿಕಿತ್ಸಾಲಯದಲ್ಲಿ ಒಂದು ಪಶುವೈದ್ಯಾಧಿಕಾರಿ ಹಾಗೂ ವಾಹನ ಚಾಲಕರ ಹುದ್ದೆ ಖಾಲಿ ಇದ್ದು, ಸಂಚಾರಿ ಪಶು ಚಿಕಿತ್ಸಾಲಯ ಮಾರ್ಗದಲ್ಲಿ ಚಿಕಿತ್ಸೆ ನೀಡಲು ಪಶು ಆಸ್ಪತ್ರೆ ಕುಮಟಾ ಹಿರಿಯ ಪಶುವೈದ್ಯಕೀಯ ಪರೀಕ್ಷಕರನ್ನು ವಾರಕ್ಕೆ ಎರಡು ದಿನ ಹಾಗೂ ಪಶು ಚಿಕಿತ್ಸಾಲಯ ಬಾಡ ಇಲ್ಲಿಯ ಹಿರಿಯ ಪಶುವೈದ್ಯಕೀಯ ಪರೀಕ್ಷಕರು ವಾರಕ್ಕೆ ಇನ್ನೆರಡು ದಿನ ನಿಯೋಜಿಸಿ ಸೇವೆ ನೀಡಲಾಗುತ್ತಿದೆ ಪಶು ಚಿಕಿತ್ಸಾಲಯ ಗೋಕರ್ಣದಲ್ಲಿ ಪಶುವೈದ್ಯಾಧಿಕಾರಿ ಹುದ್ದೆ ಖಾಲಿ ಇದ್ದು ಅಲ್ಲಿಗೆ ಗತಕಾಲದ ಪಶುವೈದ್ಯರು ವಾರಕ್ಕೆ ಎರಡು ದಿನ ಹೋಗಿ ಚಿಕಿತ್ಸಾ ನೀಡಲು ನಿಯೋಜಿಸಿ ಸೇವೆ ಒದಗಿಸಲಾಗಿದೆ ಉಳಿದ ದಿನಗಳಲ್ಲಿ ಪಶುವೈದ್ಯಕೀಯ ಪರೀಕ್ಷಕರು ಕಾರ್ಯನಿರ್ವಹಣೆ ನೀಡುತ್ತಿದ್ದಾರೆ ಉಳಿದ ಪಶುವೈದ್ಯ ಸಂಸ್ಥೆಗಳು ಎಲ್ಲ ಸಿಬ್ಬಂದಿ ಭರ್ತಿವಾಗಿದ್ದು ಕಾರ್ಯನಿರ್ವಹಿಸುತ್ತಾರೆ

ಇ) ಶೇಕಡಾ 90 ರಷ್ಟು ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಮುಂಬಡ್ತಿ ಮುಖೇನ ಭರ್ತಿ ಮಾಡಲಾಗುವುದು ಶೇ 10% ರಷ್ಟು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಬೇಕಾಗಿದ್ದು 4 ಸಹಾಯಕ ನಿರ್ದೇಶಕ ಹುದ್ದೆಗಳನ್ನು ನೇರ ನೇಮಕಾತಿಗಾಗಿ ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ಕ್ರಮ ಇದ್ದು, ಪ್ರಸ್ತುತ ಕರ್ನಾಟಕ ಲೋಕ ಸೇವಾ ಆಯೋಗದಿಂದ 41 ಪಶುವೈದ್ಯಾಧಿಕಾರಿಗಳ ನೇಮಕಾತಿಗೆ ಸಂದರ್ಶನ ಮುಗಿದಿದ್ದು, ನೇಮಕಾತಿ ಆದೇಶ ನೀಡಬೇಕಾಗಿದೆ ಮತ್ತೆ 77 ಪಶುವೈದ್ಯಾಧಿಕಾರಿಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ ವಿಶೇಷ ನೇಮಕಾತಿ ನಿಯಮ 2003ರ ಅಡಿ 577 ಪಶುವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಬೇಕಾಗಿದ್ದು, ಇದುವರೆಗೆ 383 ಪಶುವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಲಾಗಿದ್ದು ಉಳಿಕೆ

194 ಪಶುವೈದ್ಯಾಧಿಕಾರಿಗಳ ನೇಮಕಾತಿ ಮಾಡಲು ಪ್ರಸ್ತಾವನೆ ಸಹ ಪರಿಶೀಲನೆಯಲ್ಲಿದೆ ಪಶುವೈದ್ಯಕೀಯ ಮೇಲ್ವಿಚಾರಕರು ಮತ್ತು ಹಿರಿಯ ಪಶುವೈದ್ಯಕೀಯ ಪರೀಕ್ಷಕರು ಹುದ್ದೆಯನ್ನು ಮುಂಬಡ್ತಿ ಮುಖೇನ ಭರ್ತಿ ಮಾಡಲಾಗುತ್ತದೆ 300 ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ ಪಶುವೈದ್ಯಕೀಯ ಸಹಾಯಕರ ಹುದ್ದೆಗಳನ್ನು ಇಲಾಖೆಯಲ್ಲಿನ ಎಸ್ ಎಸ್ ಎಲ್ ಸಿ ಪಾಸಾದ ಡಿ ದರ್ಜೆ ನೌಕರರಿಗೆ ತರಬೇತಿ ನೀಡಿ ಬಡ್ತಿ ಮುಖೇನ ತುಂಬಲು ಕ್ರಮವಹಿಸಿದ್ದು ಈಗಾಗಲೇ 244 ಡಿ ದರ್ಜೆ ನೌಕರರಿಗೆ ತರಬೇತಿ ನೀಡಲಾಗಿದೆ ಎಸ್ ಎಸ್ ಎಲ್ ಸಿ ಅಂಕಪಟ್ಟಿ ಪರೀಕ್ಷೆ ಮಂಡಳಿಯ ಪರಿಶೀಲನೆಗೆ ಕಳುಹಿಸಿದ್ದು ವರದಿ ಬಂದ ಕೂಡಲೇ ಭರ್ತಿ ಮಾಡಲು ಕ್ರಮ ಜರುಗಿಸಲಾಗುವುದು 300 ಡಿ ದರ್ಜೆ ನೌಕರರ ಹುದ್ದೆಗಳನ್ನು ಔಟ್ ಸೋರ್ಸ್ ಮುಖೇನ ಭರ್ತಿ ಮಾಡಲು ಕ್ರಮ ಜರುಗಿಸಲಾಗುತ್ತಿದೆ

616 (880) ಶ್ರೀ ಪದ್ಮನಾಭ ಕೊಟ್ಟಾರಿ ಕೆ (ವಿಟ್ಲ) ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾಂತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಟ್ಲದಲ್ಲಿರುವ ಐ ಟಿ ಐ ತರಬೇತಿ ಕೇಂದ್ರಕ್ಕೆ ಮಂಜೂರಾಗಿರುವ ವಿವಿಧ ದರ್ಜೆಗಳ ಹುದ್ದೆಗಳ ಸಂಖ್ಯೆ ಎಷ್ಟು? ಅವುಗಳಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು?

ಆ) ಗ್ರಾಮಾಂತರ ಪ್ರದೇಶದಲ್ಲಿರುವ ಈ ಕೈಗಾರಿಕಾ ತರಬೇತಿ ಕೇಂದ್ರಕ್ಕೆ ಕೊರತೆ ಇರುವ ಸಿಬ್ಬಂದಿ ವರ್ಗದವರನ್ನು ತುಂಬಲು ದೀರ್ಘಕಾಲದಿಂದಲೂ ಸರ್ಕಾರ ಕ್ರಮ ಜರುಗಿಸದೇ ಇರಲು ಕಾರಣಗಳೇನು?

ಇ) ಸಿಬ್ಬಂದಿ ಮತ್ತಿತರ ಮೂಲಭೂತ ಸೌಲಭ್ಯಗಳಿಲ್ಲದೆ ಇಂಥ ಶಿಕ್ಷಣ ಕೇಂದ್ರಗಳನ್ನು ನಡೆಸುವುದರಿಂದ ಗ್ರಾಮೀಣ ಜನರಿಗೆ ಯಾವ ಶೈಕ್ಷಣಿಕ ಉಪಯುಕ್ತತೆಗಳು ಲಭ್ಯವಾಗುವುದಿಲ್ಲವೆಂಬುದನ್ನು ಸರ್ಕಾರ ಮನಗಂಡಿದೆಯೇ? ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) ಯಾವ ಹುದ್ದೆಗಳು ಮಂಜೂರಾತಿ ಆಗಿರುವುದಿಲ್ಲ ತಾತ್ಕಾಲಿಕ ಹುದ್ದೆಗಳನ್ನು ಬೇರೆ ಕೈಗಾರಿಕಾ ತರಬೇತಿ ಸಂಸ್ಥೆಗಳಿಂದ, ಪ್ರಾಚಾರ್ಯರು–01, ಕಿರಿಯ ತರಬೇತಿ ಅಧಿಕಾರಿ–4, ಪ್ರಥಮ ದರ್ಜೆ ಸಹಾಯಕರು–1, ಒಟ್ಟು ಆರು ಹುದ್ದೆಗಳನ್ನು ಸ್ಥಳಾಂತರಿಸಲಾಗಿದೆ